**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:- ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಲ್ಲಿ 2018-19ನೇ ಸಾಲಿಗೆ ಫಲಾನುಭವಿಗಳನ್ನು ಆಯ್ಕೆ ಮಾಡುವ ಕುರಿತು.

ಓದಲಾಗಿದೆ:- ದೇಹಿನಿ/ಲೆವಿ/ಪ.ಆ/ಸಿಆರ್-23/2018-19, ದಿ:25.07.2018.

******

<u>ಪ್ರಸ್ತಾವನೆ:-</u>

ಮೇಲೆ ಓದಲಾದ (1)ರ ಪ್ರಸ್ತಾವನೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಇವರಿಂದ ಹಿಂದುಳಿದ ವರ್ಗಗಳ ಆರ್ಥಿಕ ಅಭಿವೃದ್ಧಿಗಾಗಿ 2018-19ನೇ ಸಾಲಿಗೆ ರಾಜ್ಯ ಸರ್ಕಾರವು ಆಯವ್ಯಯದಲ್ಲಿ ಒದಗಿಸಿರುವ ಷೇರು ಬಂಡವಾಳ ಮತ್ತು ಅನುದಾನವನ್ನು ವಿವಿಧ ಯೋಜನೆಗಳಿಗೆ ಹಂಚಿಕೆ ಮಾಡಿ 2018-19ನೇ ಸಾಲಿನ ಕ್ರಿಯಾ ಯೋಜನೆಯನ್ನು ರೂಪಿಸಲಾಗಿರುತ್ತದೆ.

I. ಸರ್ಕಾರದ ಆದೇಶ ಸಂಖ್ಯೆ:ಸಕಇ/162/ಎಸ್‌ಡಿಸಿ 2015, ದಿ:04.07.2016ರನ್ವಯ ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿ ಮೂಲಕ ಈ ಕೆಳಕಂಡ ಯೋಜನೆಗಳಲ್ಲಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಬೇಕಾಗಿರುತ್ತದೆ.

1. ಸ್ವಯಂ ಉದ್ಯೋಗ ನೇರ ಸಾಲ ಯೋಜನೆ.
2. ಕಿರು ಸಾಲ ಯೋಜನೆ.
3. ಸಾಂಪ್ರದಾಯಕ ವೃತ್ತಿದಾರರು ಹಾಗೂ ಕುಶಲಕರ್ಮಿಗಳ ಆರ್ಥಿಕ ನೇರವು ಯೋಜನೆ.
4. ಗಂಗಾ ಕಲ್ಯಾಣ ನೀರಾವರಿ ಯೋಜನೆ.

ಡಿ. ದೇವರಾಜು ಅರಸು ಹಿಂದುಳಿದ
ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ
ಬೆಂಗಳೂರು
28 AUG 2018
ಕ್ರಮ-1

II. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 31 ಸಮನ್ವಯ 2013, ದಿ:25.02.2013ರ ಆದೇಶದನ್ವಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿ ಮೂಲಕ ಈ ಕೆಳಕಂಡ ಯೋಜನೆಗಳಲ್ಲಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಬೇಕಾಗಿರುತ್ತದೆ.

1. ಚೈತನ್ಯ ಸಹಾಯಧನ ಯೋಜನೆ.
2. ಅರಿವು ಶೈಕ್ಷಣಿಕ ಸಾಲ ಯೋಜನೆ.
3. ನಿರುದ್ಯೋಗಿ ಪದವೀದರರಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ.

ಈ ಮೇಲ್ಕಂಡ ಯೋಜನೆಗಳಲ್ಲಿ ಸಾಲ ಸೌಲಭ್ಯ ಒದಗಿಸಲು ಅರ್ಹ ಅರ್ಜಿದಾರರಿಂದ ಅರ್ಜಿಗಳನ್ನು ಅಹ್ವಾನಿಸಿ ಯೋಜನೆಯ ಅನುಷ್ಠಾನಕ್ಕೆ ಕಛೇರಿಗೆ ಅರ್ಜಿ ಸಲ್ಲಿಸಿದೇ ಇರುವ ಅರ್ಜಿದಾರರನ್ನು ಆಯ್ಕೆ ಸಮಿತಿಯಿಂದ ಆಯ್ಕೆ ಮಾಡಿ ಇಂತಹ ಅರ್ಜಿದಾರರಿಂದ ದಾಖಲಾತಿ ಪಡೆಯುವಲ್ಲಿ ಆಗುವ ವಿಳಂಬವನ್ನು ತಪ್ಪಿಸಲು ನಿಗಮದ ಪ್ರಕಟಣೆ ಮೇರೆಗೆ ಸಲ್ಲಿಸಿದ ಅರ್ಜಿಗಳಲ್ಲಿ ಮಾತ್ರ ಅರ್ಹ ಫಲಾನುಭವಿಗಳನ್ನು ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿ ರಚಿಸುವ ಆಯ್ಕೆಸಮಿತಿಗಳು ಅಕ್ಟೋಬರ್ 2018ರೊಳಗೆ ಆಯ್ಕೆ ಮಾಡುವುದು. ಒಂದು ವೇಳೆ ಫಲಾನುಭವಿಗಳನ್ನು ಅಕ್ಟೋಬರ್ 2018ರೊಳಗೆ ಆಯ್ಕೆ ಮಾಡಿದಿದ್ದಲ್ಲಿ ಅಂತಹ ವಿಧಾನಸಭಾ ಕ್ಷೇತ್ರದ ಫಲಾನುಭವಿಗಳನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ಅಧ್ಯಕ್ಷತೆಯಲ್ಲಿ ರಚಿಸಿರುವ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆ ಏರ್ಪಡಿಸಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಅಧಿಕಾರವನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರಿಗೆ ನೀಡುವ ಬಗ್ಗೆ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ರವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯಲ್ಲಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯು 890 ಬಿಎಂಎಸ್ 2018, ಬೆಂಗಳೂರು</u>

<u>ದಿನಾಂಕ:27.08.2018</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದಿ ನಿಗಮ ನಿಯಮಿತದಿಂದ ವಿವಿಧ ಯೋಜನೆಗಳಿಗೆ 2018-19 ನೇ ಸಾಲಿಗೆ ಅರ್ಹ ಫಲಾನುಭವಿಗಳನ್ನು ಮಾನ್ಯ ಶಾಸಕರ

.......2

ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿಗಳು ಅಕ್ಟೋಬರ್ 2018ರೊಳಗೆ ಆಯ್ಕೆ ಮಾಡುವುದು. ಒಂದು ವೇಳೆ ಫಲಾನುಭವಿಗಳನ್ನು ಅಕ್ಟೋಬರ್ 2018ರೊಳಗೆ ಆಯ್ಕೆ ಮಾಡದಿದ್ದಲ್ಲಿ ಅಂತಹ ವಿಧಾನಸಭಾ ಕ್ಷೇತ್ರದ ಫಲಾನುಭವಿಗಳನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ಅಧ್ಯಕ್ಷತೆಯಲ್ಲಿ ರಚಿಸಿರುವ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆ ಏರ್ಪಡಿಸಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಅಧಿಕಾರವನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರಿಗೆ ಅನುಮತಿ ನೀಡಿ ಆದೇಶಿಸಿದೆ.

ಈ ಆದೇಶವನ್ನು ಸನ್ಮಾನ್ಯ ಮುಖ್ಯಮಂತ್ರಿಯವರ ಕಾರ್ಯಾಲಯದ ಟಿಪ್ಪಣಿ ಸಂಖ್ಯೆ:3171/2018 ದಿ:07.08.2018ರನ್ವಯ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2018, ದಿ:03.04.2018ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಆರ್. ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು
4. ರಾಜ್ಯ ಖಜಾನಾಧಿಕಾರಿಗಳು ಬೆಂಗಳೂರು.

ಪ್ರತಿ:-

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.